## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ಬೆಂಗಳೂರು

**************************************************************************************

ಸಂಖ್ಯೆ: w-136/Committee/Proceding -17/2021-22 dt. 07-06-2021

## ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯ;ಲ್ಲಿ ಉಪಸ್ಥಿತರಗೊರಿವ ಮಾನ್ಯ ನೋಡಲ್ ಆದಿಕಾರಿಗಳಿಗೆ ಮತ್ತು ಉನ್ನತ ಸಭೆಯಲ್ಲಿ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅದಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

### ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಕರ್ನಾಟಕ ಸರ್ಕಾರದ ಆದೇಶದಂತೆ ವಾರ್ಡ್ ಮಟ್ಟದ ವಿಕೇಂದ್ರಿಕೃತ ಚಿಕಿತ್ಸೆಯ ಸದರಿ ನಿರ್ಧರ ಮತ್ತುತುರ್ತು ಪ್ರತಿಕ್ರಿಯೆ ಸಮಿತಿ (Deter) ಸಮಿತಿ ರಚನೆಯಾಗಿದ್ದು ಹಾಗೂ ಸದರಿ ಕಮೀಟಿಯು ಕಾರ್ಯದ ಬಗ್ಗೆ ಸಭಯಲ್ಲಿ ವಿವರಣೆ ನೀಡುವಂತೆ ಕೋರಿದರು.

ಆರೋಗ್ಯ ಪರಿವೀಕ್ಷಕರು ವಾಡ್-136 ಮತ್ತು ಕಂದಾಯ ಪರಿವೀಕ್ಷರು ವಾರ್ಡ್-136 ರವರು ಜೆ.ಜೆ.ಆರ್ ನಗರ ವ್ಯಾಪ್ತಿಗೆ TRIAGE ಬಿ.ಬಿ.ಎಂ.ಪಿ ಸಮೂದಾಯ ಭವನ, 9ನೇ ಅಡ್ಡರಸ್ತೆ, ದೇವರಜ್ ಅರಸುನಗರ, ಬೆಂಗಳೂರು-26 ರಲ್ಲಿ ನಾನ್ ಕೋವಿಡ್ ಅಸ್ಪತ್ರೆ ಮತ್ತು TRIAGE ಕೇಂದ್ರ ಸ್ಥಾಪನೆಯಾಗಿದ್ದು ಕೋವಿಡ್ ಸೊಂಕಿತರಿಗೆ ಸದರಿ ಕೇಂದ್ರ ದಲ್ಲಿ ಆರೈಕೆ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಕಂದಾಯ ಪರಿವೀಕ್ಷಕರು ಹೊಸಹಳ್ಳಿ ಮುಖ್ಯರಸ್ತೆಯಲ್ಲಿ ಬರುವ ಬಿ.ಬಿ.ಎಂ.ಪಿ ಬಹುಪಯೋಗಿ ಕಟ್ಟಡದಲ್ಲಿ ಮೊದಲನೇ ಮಹಡಿಯಲ್ಲಿ ವಾರ್ಡ್ 136 ವಾರ್ ರೂಮ್ ಸ್ಥಾಪಿಸಲಾಗಿದ್ದು ಕಛೇರಿಯ ಮುಂದೆ ವಾರ್ ರೂಮ್ ಬಗ್ಗೆ ಮಾಹಿತಿ ನೀಡುವ ಬೊರ್ಡ್ ಹಾಕಿದ್ದು ಸಾರ್ವಜನಿಕರು ಸದರಿ ವಾರ್ ರೂಮಿನ ಉಪಯೋಗ ಪಡೆಯುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಕಂದಾಯ ಇಲಾಖೆಯವರಿಗೆ ತಮ್ಮ ಪರಿವೀಕ್ಷಣೆಯಲ್ಲಿ ಭೂತ್ ಮಟ್ಟದ ಅಧಿಕಾರಿಗಳಿಂದ ಎರಡನೇ ಹಂತದ ಕರೋನದ ಬಗ್ಗೆ ಜನರಲ್ಲಿ ಜಾಗೃತಿ ನೀಡಲು ಮತ್ತು ಕರೋನ ಕಂಡುಬಂದಲ್ಲಿ ಮೊದಲನೇ ಹಂತ ಮತ್ತು ಎರಡನೇ ಹಂತದ ಸಂಪರ್ಕಿತರನ್ನು ಗುರುತಿಸಲು ಸಭೆಯಲ್ಲಿ ತಿಳಿಸಿದರು.

ಕಂದಾಯ ಅಧಿಕಾರಿಗಳು ಸುಮಾರು 15 ದಿನಗಳಿಂದ ಪ್ರತಿ ದಿನ 2 ಸೋಂಕಿತರು ಪತ್ತೆಯಾಗುತ್ತಿದ್ದು ಸದರಿ ರವರನ್ನು ಗುರ್ತಿಸಿ ವೈದ್ಯಾಧಿಕಾರಿಗಳು ಮತ್ತು ವೈದ್ಯಾರು ನೀಡಿದ ಸಲಹೆಯಂತೆ TRIAGE ಕೇಂದ್ರ, ಹೊಮ್ ಐಸೊಲೇಷನ್ ಮತ್ತು ಅಸ್ಪತ್ರೆಗಳಿಗೆ ಸೋಂಕಿತರನ್ನು ದಾಖಲಾತಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಆರೋಗ್ಯ ವೈದ್ಯಾಧಿಕಾರಿಗಳ ಪ್ರತಿ ನಿಧಿಯು ವಾರ್ಡ್ 136ರ ವ್ಯಾಪ್ತಿಗೆ ಬರುವ ಜೆ.ಜೆ.ಆರ್ ನಗರ ಉದ್ಯಾನವನದಲ್ಲಿ 45 ವರ್ಷ ಮೇಲ್ಪಟ್ಟ ಸರ್ಕಾರದ ನಿಯಾಮನುಸಾರ ಪ್ರತಿ ನಿತ್ಯಾ ಸರಸರಿ 150 ಜನಗಳಿಗೆ ಲಸಿಕೆಯನ್ನು ನೀಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಸಾರ್ವಜನಿಕರಿಗೆ ಹೆಚ್ಚಿನ ಕುಡಿಯುವ ನೀರಿನ ಅವಶ್ಯಕವಾಗಿರುವುದರಿಂದ ಕುಡಿಯುವ ನೀರಿನ ಪೂರೈಕೆ ಮತ್ತು ಕೊಳವೆ ಬಾವಿಗಳಿಂದ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಸೂಚಿಸಿದರು.

ಬಿಡಬ್ಲೂಎಸ್ಎಸ್‌ಬಿ ಆಧಿಕಾರಿಗಳು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು..

ಬೆಸ್ಕಂ ಕಛೇರಿಗೆ ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಬೇಸಿಗೆ ಕಾಲದಲ್ಲಿ ವಿದ್ಯೂತ್ ಪೂರೈಕೆಯನ್ನು ಮಿತಗೊಳಿಸದಂತೆ ವಿದ್ಯೂತ್ ಸರಬರಾಜು ಮಾಡುವಂತೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಮಳೆಗಾಲ ಹತ್ತಿರ ಬರುತ್ತಿದ್ದು ಮಳೆಯಿಂದ ಹಾನಿ ತಪ್ಪಿಸಲು ಕೈಗೊಂಡ ಕ್ರಮದ ಬಗ್ಗೆ ಸಭೆಯಲ್ಲಿ ಪ್ರಸ್ತಪಿಸಿದರು

ಸಹಾಯಕ ಅಭಿಯಂತರರು ಈ ಬಗ್ಗೆ ಉಪ ವಿಭಾಗದ ವ್ಯಾಪ್ತಿಯಲ್ಲಿ ಒಂದು ಕಂಟ್ರೋಲ್ ರೂಮ್ ತೆರೆದು ಒಂದು ಟ್ರಾಕ್ಟರ್ ಮತ್ತಯು ಕೂಲಿಯಾಲುಗಳನ್ನು ಉಪಯೋಗಿಸಿಕೊಂಡು ಪರಿಹಾರ ಕಾರ್ಯವನ್ನು ಕೈಗೊಳ್ಳಲು ಟೆಂಡರ್ ಪ್ರಕ್ರಿಯೆಯಲ್ಲಿದ್ದು ತದನಂತರ ಕಾರ್ಯ ನಿರ್ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು

ಬೆಸ್ಕಂ ಅಧಿಕಾರಿಯವರು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಬೇಸಿಗೆ ಕಾಲದಲ್ಲಿ ವಿದ್ಯೂತ್ ಪೂರೈಕೆಯನ್ನು ಸರಬರಾಜು ಮಾಡುವಂತೆ ಸಭೆಯಲ್ಲಿ ಅಧ್ಯಕ್ಷರಿಗೆ ತಿಳಿಸಿದರು.

ಮಾನ್ಯ ನೋಡಲ್ ಅಧಿಕಾರಿಗಳು ಹಿಂದಿನ ಸಭೆಯಲ್ಲಿ ನಿರ್ಣಹಿಸಿದಂತೆ ಬಿ.ಬಿ.ಎಂ.ಪಿ ಸಮೂದಾಯ ಭವನ ದೇವರಾಜು ಅರಸುನಗರದಲ್ಲಿ TRIAGE ಅಸ್ಪತ್ರೆಯನ್ನಗಿಸಿರುವುದರಿಂದ ಪಕ್ಕದಲ್ಲಿ ಕಸದ ಪಾಯಿಂಟ್ ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ಸೂಚಿಸಿದರು

ಅದಕ್ಕೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ಕಸದ ಪಾಯಿಂಟ್ ತೆರವುಗೊಳಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು ಮತ್ತು ಸಂಬಂಧ ಪಟ್ಟ ಛಾಯಾ ಚಿತ್ರಗಳ ಪ್ರತಿಗಳನ್ನು ಸಭೆಗೆ ನೀಡಿದರು.

ಮಾನ್ಯ ನೋಡಲ್ ಅಧಿಕಾರಿಗಳು ಕಾಮಗಾರಿಗೆ ಸಂಬಂಧಿಸಿದ ದೂರುಗಳು ಮತ್ತು ದೂರನ್ನು ನಿವಾರಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಮಾನ್ಯ ಕಾರ್ಯದಶಿಗಳು ಮತ್ತು ಸಹಾಯಕ ಅಭಿಯಂತರರು, ಕರೋನ ಸೊಂಕಿನಿಂದ ಸಾರ್ವಜನಿಕರು ವಾರ್ಡ್– ಕಛೇರಿಗೆ ಭೇಟಿ ಮಾಡಿ ದೂರುಗಳನ್ನು ನೀಡುತ್ತಿಲ್ಲ, ಆದರೆ ಬಿ.ಬಿ.ಎಂ.ಪಿ ಸಹಾಯ–2.0 ದಲ್ಲಿ ವಾರ್ಡ್‌ಗೆ ಸಂಬಂಧಿಸಿದಂತೆ ದೂರುಗಳನ್ನು ದಾಖಲಿಸಿದ್ದು, ಸದರಿ ದೂರುಗಳನ್ನು ಅಧ್ಯಾತೆ ಮೇರೆಗೆ ಪರಿಹರಿಸಲಾಗಿರುವುದನ್ನು ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

---4

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ॥ ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ) ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | 7/06/2021 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು | |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ.<br>ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 873557760 | ಸದಸ್ಯರು | |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 7349649906 | ಸದಸ್ಯರು | |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿಎನ್ ಎನ್. ಲಕ್ಷ್ಮಿ ನರಸಿಂಹಯ್ಯ<br>ದೂ. 9845563157 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>[redacted] 8618556909 | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿಧಿ | ಸದಸ್ಯರು | |

ಸಹಾಯಕ ಇಂಜಿನಿಯರ್
ಕಾ & ಪಾ ಘಟಕ-8,
ಬೆ.ವಿ.ಕಂ., ಪಶ್ಚಿಮ 3ನೇ ಉಪ-
ಗೋರಿಪಾಳ್ಯ, ಬೆಂಗಳೂರು-56

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮಿತಿ

ಅಧ್ಯಕ್ಷರು 7/06/2021
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ